ಮೈಸೂರು ಡಿಸ್ಟ್ರಿಕ್ಟ್.

ಮೈಸೂರು ಡಿಸ್ಟ್ರಿಕ್ಟ್ ಜಡ್ಜ್‌ರ್‌ಯವರ ಕೋರ್ಟಿನಲ್ಲಿ.

1887ನೇ ಇಸವಿ ಅರ್ಜೀ ನಂಬರ್ 502.

ಮೃತಪಟ್ಟ ಲಿಂಗೇಗೌಡನ ಆಸ್ತೀ ವಿಷಯದಲ್ಲಿ—

ಅರ್ಜೀದಾರ್ ಸುಬ್ಬೇಗೌಡನು ಮೃತಪಟ್ಟ ಸದರೀ ಲಿಂಗೇಗೌಡನಿಗೆ ಅಣ್ಣ ಆಗಬೇಕೆಂಬ ಹಕ್ಕುದಾರೀ ಮೇಲೆ ಮಂಜರಾಬಾದ್ ತಾ|| ಬ್ಯಾಗಡವಳ್ಳಿ ಹೋಬಳಿ ಅರಣೀ ಗ್ರಾಮಕ್ಕೆ ಶೇರಿದ ಹೊನ್ನಹಳ್ಳಿ ಸ್ಥಳದ ಸದರೀ ಸುಬ್ಬೇಗೌಡನು ಸದರೀ ವಾಸಸ್ಥನಾಗಿ ಮೃತಪಟ್ಟ ಲಿಂಗೇಗೌಡನ ಜಿಂದಗೀ ಬಗ್ಯಾಗಿ ಬರತಕ್ಕ 100 ರೂಪಾಯಿ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.

ಸದರೀ ದರಖಾಸ್ತುದಾರನಾದ ಸುಬ್ಬೇಗೌಡನ ಅರ್ಜೀಯನ್ನು 1887ನೇ ಇಸವಿ ನವೆಂಬರ್ ತಿಂಗಳು ತಾರೀಖು 14ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿನಮ್ರ್ಕೀ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಲಿಂಗೇಗೌಡನ ಆಸ್ತಿಗೆ ಹಕ್ಕುದಾರರಾದವಿಸಿಪ್ಪರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1887ನೇ ಇಸವಿ ಅರ್ಜೀ ನಂಬರ್ 515.

ಮೃತಪಟ್ಟ ಕಿಲ್ಲೇದಾರ್ ದೇವರಾಜೇ ಅರಸಿನವರ ಆಸ್ತೀ ವಿಷಯದಲ್ಲಿ—

ಅರ್ಜೀದಾರ್ ದೇವಿನಂಜರಾಜೇಅರಸ್ ಮೈನರ್, ಗಾರ್ಡಿರ್ಯ ಮತ್ತು ದತ್ತುತಾಯಿ ವೀರಾಜಮ್ಮಣ್ಣೀಯವರು, ದೇವರಾಜೇ ಅರಸಿನವರಿಗೆ ದತ್ತುಮಗ, ಹೆಂಡತಿ ಆಗಬೇಕೆಂಬ ಹಕ್ಕುದಾರೀ ಮೇಲೆ ಮೈಸೂರು ಕಿಲ್ಲೇ ಸ್ಥಳದ ಸದರೀ ದೇರಾಜಮ್ಮಣ್ಣೀರು ಸದರೀ ವಾಸಸ್ಥರಾಗಿ ಮೃತಪಟ್ಟ ದೇವರಾಜೇ ಅರಸಿನವರ ಜಿಂದಗೀ ಬಗ್ಯಾಗಿ ಬರತಕ್ಕ 500 ರೂಪಾಯಿಗಳ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್‌ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ವೀರಾಜಮ್ಮಣ್ಣೀಯವರ ಅರ್ಜೀಯನ್ನು 1887ನೇ ಇಸವಿ ನವೆಂಬರ್ ತಿಂಗಳು 14ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೀ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ದೇವರಾಜೇಅರಸಿನವರ ಆಸ್ತಿಗೆ ಹಕ್ಕುದಾರರಾದ ವಿಸಿಪ್ಪರು ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯುಪಡಿಸಿ ಇದೆ.

1887ನೇ ಇಸವಿ ಅರ್ಜೀ ನಂಬರ್ 516.

ಮೃತಪಟ್ಟ ಗ್ರಾಮದ ಪುಟ್ಟಣ್ಣಶೆಟ್ಟರ ಆಸೀ ವಿಷಯದಲ್ಲಿ—

ಅರ್ಜೀದಾರ ದೇವರಾಜಯ್ಯನವರು ಮೃತಪಟ್ಟ ಸದರೀ ಪುಟ್ಟಣ್ಣಶೆಟ್ಟರಿಗೆ ದತ್ತು ಮಗ ಆಗಬೇಕೆಂಬ ಹಕ್ಕುದಾರೀ ಮೇಲೆ ಹಾಸನದ ಕಸಬಾ ಸ್ಥಳದ ಸದರೀ ದೇವರಾಜಯ್ಯನವರು ಸದರೀ ವಾಸಸ್ಥನಾಗಿ ಮೃತಪಟ್ಟ ಪುಟ್ಟಣ್ಣಶೆಟ್ಟರ ಜಿಂದಗೀ ಬಗ್ಯಾಗಿ ಬರತಕ್ಕ 1000 ರೂಪಾಯಿ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ದೇವರಾಜಯ್ಯನವರ ಅರ್ಜೀಯನ್ನು 1887ನೇ ಇಸವಿ ನವೆಂಬರ್ ತಿಂಗಳು ತಾರೀಖು 14ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೀ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಪುಟ್ಟಣ್ಣಶೆಟ್ಟರ ಆಸ್ತಿಗೆ ಹಕ್ಕುದಾರರಾದ ವಿಸಿಪ್ಪರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1887ನೇ ಇಸವಿ ಅರ್ಜೀ ನಂಬರ್ 518.

ಮೃತಪಟ್ಟ ಶೇಕದಾರ್ ಶ್ರೀನಿವಾಸಯ್ಯಂಗಾರ್ರ ಆಸ್ತೀ ವಿಷಯದಲ್ಲಿ—

ಅರ್ಜೀದಾರ ಶ್ರೀರಂಮ್ಮನು ಮೃತಪಟ್ಟ ಸದರೀ ಶ್ರೀನಿವಾಸಯ್ಯಂಗಾರ್ರಿಗೆ ಹೆಂಡತಿ ಆಗಬೇಕೆಂಬ ಹಕ್ಕುದಾರೀ ಮೇಲೆ ಹಾಸನದ ತಾಲ್ಲೂಕು ಗ್ರಾಮದ ಕಸಬಾ ಸ್ಥಳದ ಸದರೀ ಶ್ರೀರಂಗಮ್ಮನು ಸದರೀ ವಾಸಸ್ಥನಾಗಿ ಮೃತಪಟ್ಟ ಶ್ರೀನಿವಾಸಯ್ಯಂಗಾರ್ರ ಜಿಂದಗೀ ಬಗ್ಯಾಗಿ ಬರತಕ್ಕ 950 ರೂಪಾಯಿ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾಳೆ.

ಸದರೀ ದರಖಾಸ್ತುದಾರಳಾದ ಶ್ರೀರಂಗಮ್ಮನ ಅರ್ಜೀಯನ್ನು 1887ನೇ ಇಸವಿ ನವಂಬರ್ ತಿಂಗಳು ತಾರೀಖು 14ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೀ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಶ್ರೀನಿವಾಸಯ್ಯಂಗಾರ್ರ ಆಸ್ತಿಗೆ ಹಕ್ಕುದಾರರಾದ ಏಸಿಪ್ಪರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.

1887ನೇ ಇಸವಿ ಅರ್ಜೀ ನಂಬರ್ 519.

ಮೃತಪಟ್ಟ ಸುಬ್ಬಮ್ಮನವರ ಆಸ್ತೀ ವಿಷಯದಲ್ಲಿ—

ಅರ್ಜೀದಾರ ಕೀತಮ್ಮನವರು ಮೃತಪಟ್ಟ ಸದರೀ ಸುಬ್ಬಮ್ಮನಿಗೆ————ಆಗಬೇಕೆಂಬ ಹಕ್ಕುದಾರೀ ಮೇಲೆ ಪೆರಿಯಾಪಟ್ಣ ದ ತಾಲ್ಲೂಕು ಬೆಟ್ಟದಪುರದ ಸ್ಥಳದ ಸದರೀ ಕೀತಮ್ಮನು ಅರಕಲ್‌ಗೂಡು ತಾ॥ ಹೊಸಹಳ್ಳಿ ವಾಸಸ್ಥಳಾಗಿ ಮೃತಪಟ್ಟ ಸುಬ್ಬಮ್ಮನವರ ಜಿಂದಗೀ ಬಗ್ಯಾಗಿ ಬರತಕ್ಕ 150 ರೂಪಾಯಿ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾಳೆ.

ಸದರೀ ದರಖಾಸ್ತುದಾರಳಾದ ಕೀತಮ್ಮನ ಅರ್ಜೀಯನ್ನು 1887ನೇ ಇಸವಿ ನವಂಬರ್ ತಿಂಗಳು ತಾರೀಖು 14ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೀ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಸುಬ್ಬಮ್ಮನವರ ಆಸ್ತಿಗೆ ಹಕ್ಕುದಾರರಾದ ವಿಸಿಪ್ಪರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.

1887ನೇ ಇಸವಿ ಅಕ್ಟೋಬರು ತಿಂಗಳು 10ನೇ ತಾರೀಖಿನಲ್ಲಿ ಕೋರ್ಟು ವೊಹರ್ ನಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿಧೆ.

ಯಸ್. ಹೇವಾಜಿರಾವ್, ಡಿಸ್ಟ್ರಿಕ್ಟು ಜಡ್ಜ್.

ಮೈಸೂರು ಡಿಸ್ಟ್ರಿಕ್ಟು ಸಬ್ ಜಡ್ಜ್‌ರಯವರ ಕೋರ್ಟಿನಲ್ಲಿ.

ದಿವಾಳಿಯಾದ ಡಿಕ್ರಿ ದೇಣೇದಾರ ಶ್ರೀರಂಗಪಟ್ಣದ ತಾ॥ ಯೆಂಕಾರ್ ಕೊಪ್ಪಲ್‌ನಲ್ಲಿ ಇರುವ ವೆಂಕಟಪತಿ ಗೌಡನ ಹೆಂಡತಿ ತಿಮ್ಮಮ್ಮನ ವಿಷಯದಲ್ಲಿ—

ಸ್ಯ 1887ನೇ ಇಸವಿ ದಿವಾಳೀ ಕೇಸ್ ನಂಬರ್ 245.

ಹುಕ್ಕುಂ.

ಮೇಲ್ಕಂಡ ತಿಮ್ಮಮ್ಮನು, ನಿರ್ಬಂಧದಿಂದ ಖುಲಾಸೆಯಾಗಬೇಕೆಂದು ಕೊಟ್ಟ ಅರ್ಜೀ ಅಂಶವು ಈ ಕೋರ್ಟು ರೂಬರೂ ಅರ್ಜೀದ್ದಾರಳಾದ ತಿಮ್ಮಮ್ಮನು ಖುದ್ದು ಹಾಜರು ಮತ್ತು ಸದರೀಯವಳ ಲೇಣೇದಾರ್ರಾದ 2ನೇ ಕೆಂಪೇಗವುಡ ವುರಫ್ ಕಿದ್ದೇಗವುಡ ಹಾಜರ್ ಇವರಿಗೂ ದರ್ಯಾಫ್ತ್ ಮಾಡಲ್ಪಟ್ಟಿತು.

ಈ ಕೆಳಗೆ ನಮೂದು ಮಾಡಲ್ಪಡುವ ಲೇಣೇದಾರ್ರು ತಮಗೆ ಈ ದರ್ಯಾಫ್ತ್ ನೋಟೀಸ್ ಜಾರೀಯಾಗಿದ್ದಾಗ್ಯೂ ಖುದ್ದಾಗಿಯಾಗಲಿ ಅಥವಾ ಲಾಯರ್ ಮೂಲಕವಾಗಿಯಾಗಲಿ ಹಾಜರಾಗುವದಕ್ಕೆ ತಪ್ಪಿ ಹೋದರು ಯಾರಂದರೆ,—1ನೇ ವೆಂಕಟಪತಿ ವುರಫ್ ಶತ್ತೆ.

ಸಿವಿಲ್ ಪ್ರೊಸಿಜ್ಯೂರ್ ಕೋಡಿನ 20ನೇ ಅಧ್ಯಾಯದ ನಿರೂಪಣೆಗಳ ಫಲವನ್ನ ಸದರೀ ವೆಂಕಟಪತಿಗವುಡನ ಹೆಂಡತಿ ತಿಮ್ಮಮ್ಮನು ಹೊಂದುವದಕ್ಕೆ ಹಕ್ಕುದಾರಳಾಗುವದರ ಮೂಲಕ ದಿವಾಳಿಯಾದವಳೆಂದು ತೀರ್ಮಾನಿಸಲ್ಪಟ್ಟಿರುತ್ತೆಯಾಗಿ ಸದರೀ ದಿವಾಳಿಯಾದವಳನ್ನ ನಿರ್ಬಂಧದಿಂದ ವಿವೋಚನೆ ಮಾಡಿರುವದಲ್ಲದೆ ಇದಕ್ಕೆ ಲಗತ್ತಾಗಿರುವ ಪಟ್ಟಿಯಲ್ಲಿ ಕಂಡ ಯಾವ ಸಾಲಕ್ಕೂ ಸ್ತರವಾಗಿಯಾಗಲಿ ದಸ್ತಗಿರಿ ಮಾಡಲ್ಪಟ್ಟು ನಿರ್ಬಂಧಪಡುವ ಜವಾಬ್ದಾರಿಯಿಂದ ಸಹ ಅವಳನ್ನ ನಿಖಾಲಸ್ ಮಾಡಲಾಗಿರುತ್ತೆಯೆಂದು ಇದರಿಂದ ಹುಕ್ಕುಂ ಮಾಡಲ್ಪಟ್ಟಿರುತ್ತೆ.

1887ನೇ ಇಸವಿ ಅಕ್ಟೋಬರ್ 14ನೇ ತಾರೀಖಿನಲ್ಲಿ ಈ ಕೋರ್ಟು ವೊಹರ್‌ನಮ್ಮ ದಸ್ತಖತ್ ಸಿಸಿ ಕೊಡಲ್ಪಟ್ಟಿತು.

ಸಾಲದಪಟ್ಟಿ.

ನಂಬರ್	ಲೇಣೇದಾರ್ರು ಅಥವಾ ದಾವಾದಾರ್ರ ಹೆಸರು ಮತ್ತು ವಿವರ ಮತ್ತು ಹಾಲೀ ತಿಳಿಯಬಂದ ಅವರುಗಳ ವಾಸಸ್ಥಳ.	ಸಾಲದ ಮೊತ್ತ	ಯಾವಾಗ ಲೇಣೇ ಕೊಟ್ಟಿದ್ದು	ದೇಣೆಯ ಸ್ವಭಾವ ಮತ್ತು ಅದರ ಪ್ರತಿಫಲ ಮತ್ತು ಗಿರ್ವಿ ಯೇನಾದರೂ ಇದ್ದರೆ.	ಷರಾ
1	ಶ್ರೀರಂಗಪಟ್ಣದ ತಾ॥ ಎಂಮೇಕಾರ್ ಕೊಪ್ಪಲಲ್ಲಿರುವ ವೆಂಕಟಪತಿಗೌಡ ವುರಫ್ ಶತ್ತೆ. ..	229 5 2	..	ಡಿಕ್ರೀ ಬಾಬತು	